ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಪಹಣಿ ತಿದ್ದುಪಡಿ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1047 (1173) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಂದಾಯ ಇಲಾಖೆಯಲ್ಲಿ ಪಹಣಿ ತಿದ್ದುಪಡಿ ಪ್ರಕ್ರಿಯೆಯು ಬಹಳ ನಿಧಾನವಾಗಿದ್ದು, ಇದರಿಂದ ಆಸ್ತಿ ನೋಂದಣಿ ಮಾಡಲು ಹಾಗೂ ಮತ್ತಿತರ ದಾಖಲಾತಿಗಾಗಿ ಜನರು ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪಹಣಿ ತಿದ್ದುಪಡಿ ವಿಳಂಬದಿಂದಾಗಿ 11ಇ ನಕ್ಷೆಗಳು, ವಿತರಣೆಗಾಗಿ ಎಷ್ಟು ಬಾಕಿ ಉಳಿದಿವೆ;

(ಇ) ಪಹಣಿ ತಿದ್ದುಪಡಿ ವಿಳಂಬದಿಂದಾಗಿ ಖರೀದಿ ವ್ಯವಹಾರಗಳಿಗೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಪಹಣಿ ತಿದ್ದುಪಡಿಗಾಗಿ ಬಾಕಿ ಇರುವ ಪ್ರಕರಣಗಳ ಕುರಿತು ಕ್ರಮ ತೆಗೆದುಕೊಳ್ಳಲು ಎಷ್ಟು ಸಮಯದ ಅವಶ್ಯಕತೆ ಇದೆ;

(ಉ) ರಾಜ್ಯದಲ್ಲಿ ಪಹಣಿ ತಿದ್ದುಪಡಿಗಾಗಿ ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು; ತಿದ್ದುಪಡಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು? (ಮಾಹಿತಿಯನ್ನು ಒದಗಿಸುವುದು)